ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ವಿಭಾಗ
ಜಿ.ಕೆ.ವಿ.ಕೆ., ಬೆಂಗಳೂರು-560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 17-06-2016

ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಮುನ್ಸೂಚನೆ (ದಿನಾಂಕ 18.06.16 –22.06.16 ವರೆಗೆ)

	18.06.16	19.06.16	20.06.16	21.06.16	22.06.16
ಮಳೆ (ಮಿ ಮಿ)	7	6	6	21	13
ಗರಿಷ್ಠ ಉಷ್ಣಾಂಶ(ಡಿ.ಸೆ.)	28	28	27	27	25
ಕನಿಷ್ಠ ಉಷ್ಣಾಂಶ (ಡಿ.ಸೆ.)	21	21	20	20	20
ಮೋಡ (ಪ್ರಮಾಣ)	8	8	7	7	7
ಆರ್ದ್ರತೆ ೭.೨೦ ಬೆ (ಶೇ)	86	87	87	88	86
ಆರ್ದ್ರತೆ ೨.೨೦ ಮ (ಶೇ)	66	65	67	76	79
ಗಾಳಿಯ ವೇಗ (ಕಿ.ಮಿ/ಗಂಟೆಗೆ)	5	5	6	4	6
ಗಾಳಿಯ ದಿಕ್ಕು (ಡಿಗ್ರಿ)	270	270	250	230	240

ಮುಂಬರುವ 5 ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾಧ್ಯತೆಯಿದೆ . ದಿನದ ಗರಿಷ್ಠ ಉಷ್ಣಾಂಶ **25.0-28.0^o** ಸೆ ಮತ್ತು ಕನಿಷ್ಠ **20.0-21.0^o** ಸೆ ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **86-88 %** % ಇದ್ದು ಮಧ್ಯಾಹ್ನ **65-79 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **4-6** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ದುರ್ಬಲವಾಗಿರುವ ಮುಂಗಾರು ಮಳೆಯು 2-3 ದಿನಗಳಲ್ಲಿ ಮತ್ತೆ ಚುರುಕು ಪಡೆಯುವುದರಿಂದ ಮುಂಗಾರು ಬಿತ್ತನೆಯನ್ನು ತೇವಾಂಶದ ಆಧಾರದ ಮೇಲೆ ಮುಂದುವರಿಸಿ.
- ಆಯಾ ವಲಯ ಪ್ರದೇಶಕ್ಕೆ ಶಿಫಾರಸ್ಸು ಮಾಡಿದ ತಳಿಗಳನ್ನೇ ಬಿತ್ತನೆಗೆ ಬಳಸುವುದು ಸೂಕ್ತ
- ಬಿತ್ತನೆಗೆ ಮೊದಲು ಸಾವಯವ ಗೊಬ್ಬರವನ್ನು ಭೂಮಿಗೆ ಸೇರಿಸುವುದು ಹಾಗು ಭೂಮಿಯನ್ನು ಮಟ್ಟಮಾಡಿ ಬಿತ್ತನೆಗೆ ಹದಮಾಡಿಕೊಳ್ಳುವುದು.
- ಉತ್ತಮ ಮಳೆಯ ಮುನ್ಸೂಚನೆ ಇರುವುದರಿಂದ ಖುಷ್ಕಿ ಜಮೀನಿನಲ್ಲಿ ಬದು ಮತ್ತು ಬಸಿಗಾಲುವೆಗಳನ್ನು ಸ್ವಚ್ಛ ಮಾಡುವುದು ಹಾಗು ಕೃಷಿ ಹೊಂಡಗಳನ್ನು ದುರಸ್ತಿಗೊಳಿಸಿ ನೀರು ನಿಧಾನವಾಗಿ ಹರಿಯುವಂತೆ ಮಾಡುವುದು ಮಣ್ಣಿನ ಸವಕಳಿ ತಪ್ಪಿಸಿ ಹಾಗು ಮಣ್ಣಿನ ಸಂರಕ್ಷಣೆ ಮಾಡುವ್ವದು.
- ಶೇಂಗಾ ತಳಿಗಳಾದ ಜೆ ಎಲ್–24, ಟಿ.ಎಮ್.ವಿ–2 (ಬೀಜದ ಪ್ರಮಾಣ 50 ಕೆಜಿ ಪ್ರತಿ ಎಕರೆಗೆ) · ರೈಜೋಬಿಯಂ ಗೊಬ್ಬರ (2.5 ಕೆಜಿ ಪ್ರ. ಹೆ.) ಹಾಗೂ ರಂಜಕ ಕರಗಿಸುವ ಗೊಬ್ಬರ (2.5 ಕೆಜಿ ಪ್ರ. ಹೆ.). · ರಾಸಾಯನಿಕ ಗೊಬ್ಬರದ ಪ್ರಮಾಣ – 25 ಕೆಜಿ ಸಾರಜನಕ (55 ಕೆಜಿ ಯೂರಿಯ), 50 ಕೆಜಿ ರಂಜಕ (313 ಕೆಜಿ ಎಸ್.ಎಸ್.ಪಿ), 25 ಕೆಜಿ ಪೋಟ್ಯಾಷ್ (42 ಕೆಜಿ ಎಮ್.ಓ.ಪಿ), 25 ಕೆಜಿ ಸತುವಿನ ಸಲ್ಫೇಟ್ ಹಾಗೂ 25 ಕೆಜಿ ಕಬ್ಬಿಣದ ಸಲ್ಫೇಟ್. · ಮೂವತ್ತು (30) ಸೆಂ.ಮೀ ಅಂತರದ ಸಾಲುಗಳಲ್ಲಿ ಬೀಜದಿಂದ ಬೀಜಕ್ಕೆ 10 ಸೆಂ.ಮೀ. · ಕಳೆನಾಶಕ ಬಳಸಿ ಕಳೆಗಳ ಹತೋಟಿ ಮಾಡುವುದಾದಲ್ಲಿ ಬೀಜ ಬಿತ್ತಿದ ದಿನ ಅಥವಾ ಮರು ದಿನವೇ ಅಟ್ರಜೀನ್ 50 WP ಅನ್ನು 1 ಕಿ.ಗ್ರಾಂ /ಹೆ. 1000 ನೀರಿನಲ್ಲಿ ಬೆರೆಸಿ ಸಿಂಪಡಿಸಬೇಕು.
- ನೀರು ಬರಿದಾಗಿರುವ ಕೆರೆಗಳಲ್ಲಿ ಗೋಡು ಮಣ್ಣನ್ನು ತೆಗೆದು ಭೂಮಿಗೆ ಸೇರಿಸುವುದರಿಂದ ಭೂಮಿಯ ಫಲವತ್ತತೆಯನ್ನು ಹೆಚ್ಚಿಸಬಹುದು
- ಏಕಬೆಳೆ ಪದ್ದತಿಯಲ್ಲಿ ಈ ಕೆಳಗಿನ ದೀರ್ಘಾವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ

  ತೊಗರಿ : ಟಿ.ಟಿ.ಬಿ–7, ಬಿ.ಆರ್.ಜಿ–1,2,4ಮತ್ತು 5

  ಹರಳು: ಡಿ.ಸಿ.ಎಸ್–9 (ಜ್ಯೋತಿ), ಡಿ.ಸಿ.ಎಚ್–177 ಮತ್ತು 32
- ಎರಡುಬೆಳೆ ಪದ್ದತಿಯಲ್ಲಿ ಈ ಕೆಳಗಿನ ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ

  ರಾಗಿ: ಇಂಡಾಫ್–9, ಎಳ್ಳು : ನವಿಲೆ–1, ಟಿ–7, ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1

  ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ

- ಬಿತ್ತನೆಗೆ ಬೇಕಾಗುವ ಪರಿಕರಗಳ ಪೂರಕಗಳನ್ನು ಸಿದ್ಧತೆ ಮಾಡಿಕೊಳ್ಳಿ.

ಮಾವು:

- ಆಳವಾಗಿ ಉಳುಮೆ ಮಾಡುವುದರಿಂದ ಹುಳುಗಳ ವಿವಿಧ ಹಂತಗಳನ್ನು ನಾಶಪಡಿಸಬಹುದು.
- ಹಣ್ಣನ್ನು ಕಟಾವು ಮಾಡುವ ಸಮಯದಲ್ಲಿ ನೆಲಕ್ಕೆ ತಾಗದ ರೀತಿ ಎಚ್ಚರ ವಹಿಸಿ. ಇದರಿಂದ ಕಟಾವಿನ ನಂತರ ಶಿಲೀಂಧ್ರದಿಂದ ಬರುವ ಹಲವಾರು ರೋಗಗಳನ್ನು ತಡೆಯಬಹುದು.
- ಹಣ್ಣು ನೊಣದ ನಿಯಂತ್ರಣಕ್ಕಾಗಿ ಪ್ರತಿ ಹೆಕ್ಟೇರ್ ಪ್ರದೇಶದಲ್ಲಿ 10 ಮೋಹಕ ಬಲೆಗಳನ್ನು ತೂಗುಹಾಕಬೇಕು.ಪ್ರತಿ ಬಲೆಗೆ 100 ಮಿ.ಲೀ. ಕೀಟನಾಶದ ದ್ರಾವಣ ಉಪಯೋಗಿಸಬೇಕು.(ಪ್ರತಿ ಲೀಟರ್ ನೀರಿನಲ್ಲಿ 1 ಮಿ.ಲೀ.ಮೀಥೈಲ್ ಯೂಜೆನಾಲ್ ಮತ್ತು 4 ಗ್ರಾಂ ಕಾರ್ಬಾರಿಲ್ ಬೆರೆಸಿದ ದ್ರಾವಣ ಬಳಸಬೇಕು.
- ಜಾನುವಾರು: ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.

ನೋಡಲ್ ಅಧಿಕಾರಿ:

ಕೃ.ವಿ.ವಿ, ಜಿ.ಕೆ.ವಿ.ಕೆ

ಬೆಂಗಳೂರು